ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY

ಯರಗೇರಾ–584133, ರಾಯಚೂರು, ಕರ್ನಾಟಕ ರಾಜ್ಯ, ಭಾರತ

Office No.+91 9141030953 ಪರೀಕ್ಷಾ ವಿಭಾಗ E-mail: registrarevrur@gmail.com

ಕ್ರ.ಸಂ: ರಾವಿರಾ/ಪರೀಕ್ಷಾ/ಯು.ಜಿ:I&III/2023–24/ 27 ದಿನಾಂಕ : 27.04.2023

## ಸುತ್ತೋಲೆ

ವಿಷಯ : 2022–23ನೇ ಸಾಲಿನ ಸ್ನಾತಕ (UG) ಪ್ರಥಮ (ರೆಗ್ಯೂಲರ್ ಮತ್ತು ರಿಪೀಟರ್ಸ್) ಹಾಗೂ ತೃತೀಯ ಸೆಮಿಸ್ಟರ್ (ರೆಗ್ಯೂಲರ್) ಪರೀಕ್ಷೆಗಳನ್ನು ಮುಂದೂಡುವ ಕುರಿತು.

ಉಲ್ಲೇಖ : ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ : 27.04.2023

*****

ಮೇಲ್ಕಾಣಿಸಿದ ವಿಷಯ ಹಾಗೂ ಮಾನ್ಯ ಕುಲಪತಿಗಳ ಅನುಮೋದನೆಯ ಮೇರೆಗೆ, ರಾಯಚೂರು ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪದವಿ ಮಹಾವಿದ್ಯಾಲಯಗಳ ಪ್ರಾಚಾರ್ಯರಿಗೆ ಈ ಮೂಲಕ ತಿಳಿಸುವುದೇನೆಂದರೆ, ರಾಯಚೂರು ವಿಶ್ವವಿದ್ಯಾಲಯವು ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ನ ಎಲ್ಲಾ ಪರೀಕ್ಷೆಗಳನ್ನು ನಡೆಸುವ ಸಿದ್ದತೆಗಳನ್ನು ಮಾಡಿಕೊಂಡಿತ್ತು. ಅದರೆ ಕರ್ನಾಟಕ ವಿಧಾನಸಭಾ ಚುನಾವಣೆ ನಿಮಿತ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಿಂಧನೂರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಶಾಹಪೂರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಸ್ಕಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಗುರುಮಠಕಲ್ ಮತ್ತು ಎಲ್.ವಿ.ಡಿ ಮಹಾವಿದ್ಯಾಲಯ ರಾಯಚೂರು ಈ ಕಾಲೇಜುಗಳನ್ನು ಚುನಾವಣೆಗೆ ತೆಗೆದುಕೊಂಡಿರುವುದರಿಂದ ಹಾಗೂ ಎಲ್ಲಾ ಪದವಿ ಕಾಲೇಜುಗಳ ಸಿಬ್ಬಂದಿಗಳನ್ನು ಚುನಾವಣಾ ಕಾರ್ಯಗಳಿಗೆ ನಿಯೋಜಿಸಿದೆ ಹಾಗೂ ದಿನಾಂಕ 01.05.2023 ರಿಂದ 04.05.2023ರ ವರೆಗೆ ಹಾಗೂ ದಿನಾಂಕ 07.05.2023 ರಿಂದ 13.05.2023ರ ವರೆಗೆ ಯಾವುದೇ ಪರೀಕ್ಷೆಗಳನ್ನು ನಡೆಸಬಾರದೆಂದು ಚುನಾವಣಾ ಆಯೋಗದಿಂದ ನಿರ್ದೇಶನ ಬಂದಿರುವ ಕಾರಣ ಎಲ್ಲಾ ಯು.ಜಿ ಪ್ರಥಮ ಹಾಗೂ ತೃತೀಯ ಸೆಮಿಸ್ಟರ್‌ನ ಪರೀಕ್ಷೆಗಳನ್ನು ಅನಿವಾರ್ಯ ಕಾರಣಗಳಿಂದ ಮುಂದೂಡಲಾಗಿದೆ. ಶೀಘ್ರವೇ ಹೊಸ ವೇಳಪಟ್ಟಿಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಈ ಸಂಬಂಧವಾಗಿ ಎಲ್ಲಾ ಪದವಿ ಕಾಲೇಜು ಪ್ರಾಚಾರ್ಯರು ವಿಶ್ವವಿದ್ಯಾಲಯಕ್ಕೆ ಸಹಕರಿಸಬೇಕಾಗಿ ಈ ಮೂಲಕ ಸೂಚಿಸಲಾಗಿದೆ.

(ಪ್ರೊ. ಯರಿಸ್ವಾಮಿ.ಎಂ)
ಕುಲಸಚಿವರು(ಮೌಲ್ಯಮಾಪನ)
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.

ಗೆ,
ರಾಯಚೂರು ವಿಶ್ವವಿದ್ಯಾಲಯಕ್ಕೆ ಒಳಪಡುವ ಎಲ್ಲಾ ಕಾಲೇಜು ಪ್ರಾಂಶುಪಾಲರುಗಳ ಗಮನಕ್ಕೆ ಮತ್ತು ಸೂಕ್ತ ಕ್ರಮಕ್ಕಾಗಿ.

ಪ್ರತಿ:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ /ಮಾನ್ಯ ಕುಲಸಚಿವರ ಅಪ್ತ ಸಹಾಯಕ ರಾಯಚೂರು ವಿಶ್ವವಿದ್ಯಾಲಯ ರಾಯಚೂರು.
2. ಕುಲಸಚಿವರು (ಮೌಲ್ಯಮಾಪನ) ಆಪ್ತ ಸಹಾಯಕ, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
3. ಕಚೇರಿ ಪ್ರತಿ